ಮಾಡಲಾಗುತ್ತದೆ. ಜೂನ್-97ರ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟು ಪೂರ್ಣಗೊಳಿಸಲಾದ ಕುಡಿಯುವ ನೀರಿನ ಯೋಜನೆಗಳ ವಿವರಗಳ ಈ ಕೆಳಗಿನಂತಿವೆ.

1) ಕೈಪಂಪು ಕೊಳವೆ ಬಾವಿಗಳು - 151251
2) ಕಿರುನೀರು ಸರಬರಾಜು ಯೋಜನೆಗಳು - 11367
3) ಕೊಳವೆನೀರು ಸರಬರಾಜು ಯೋಜನೆಗಳು - 10838

ಗ್ರಾಮೀಣ ಪ್ರದೇಶದಲ್ಲಿ ಗ್ರಂಥಾಲಯಗಳ ಸ್ಥಾಪನೆ

2901 - ಶ್ರೀ ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಪ್ರದೇಶದಲ್ಲಿ ಗ್ರಂಥಾಲಯ ಸ್ಥಾಪನೆಗೆ ಸರ್ಕಾರದ ಮುಂದೆ ಇರುವ ಕಾರ್ಯಗಳಾವುವು?

ಆ) ಈ ಬಗ್ಗೆ ಕಳೆದ ಎರಡು ವರ್ಷಗಳಲ್ಲಿ ಸಾಧಿಸಿದ ಪ್ರಗತಿ ಏನು?

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು) :

ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಲ್ಲಿ ಗ್ರಂಥಾಲಯಗಳನ್ನು ಪ್ರಾರಂಭಿಸುವುದು ಮತ್ತು ಕಟ್ಟಡಗಳನ್ನು ಒದಗಿಸಿ ಅಭಿವೃದ್ಧಿ ಪಡಿಸುವುದು

ಆ) 1995-96ನೇ ಸಾಲಿನಲ್ಲಿ 100 ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಪ್ರಾರಂಭಿಸಲಾಗಿದೆ.

1996-97

1997-98ನೇ ಸಾಲಿನಲ್ಲಿ ಸ್ಟೇಟ್ ಸೆಕ್ಟರ್ ಯೋಜನೆ ಅಡಿಯಲ್ಲಿ 500 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಪ್ರಾರಂಭಿಸುವ ಯೋಜನೆ ಇದೆ.

ತುಮಕೂರು ಜಿಲ್ಲೆಯಲ್ಲಿ ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ

2902 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ವಿಶ್ವಬ್ಯಾಂಕ್ ನೆರವಿನಿಂದ ಕೈಗೊಂಡಿರುವ ಕುಡಿಯುವ ನೀರಿನ ಯೋಜನೆಗಳಾವುವು?

ಆ) ಕುಣಿಗಲ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಈ ಯೋಜನೆಯಡಿಯಲ್ಲಿ ಕೈಗೊಂಡಿರುವ ಗ್ರಾಮಗಳಾವುವು?